# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
## ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ
### ಮುಕ್ತಗಂಗೋತ್ರಿ, ಮೈಸೂರು-06

ಸಂಖ್ಯೆ: ಕರಾಮುವಿ/ಸ್ಪಪತಕೇ/2024-25 ದಿನಾಂಕ: 31.07.2024

**ಪತ್ರಿಕಾ ಪ್ರಕಟಣೆಯ ಕೃಪೆಗಾಗಿ**

ಕರಾಮುವಿಯಿಂದ

**ಕೆ-ಸೆಟ್ ಮತ್ತು ಯುಜಿಸಿ-ನೆಟ್ ಪರೀಕ್ಷೆಗಳಿಗೆ ತರಬೇತಿ**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ **'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'**ದ ವತಿಯಿಂದ ಕರ್ನಾಟಕ ಸರ್ಕಾರವು ಕೆಇಎ(ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಮೂಲಕ ನಡೆಸಲಿರುವ **ರಾಜ್ಯ ಮಟ್ಟದ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್)** ಹಾಗೂ ನವದೆಹಲಿಯ ವಿಶ್ವವಿದ್ಯಾನಿಲಯದ ಧನಸಹಾಯ ಆಯೋಗದವರು ನಡೆಸಲಿರುವ ರಾಷ್ಟ್ರ ಮಟ್ಟದ ಕಾಲೇಜು ಸಹಾಯಕ ಪ್ರಾಧ್ಯಾಪಕರ **(ಯುಜಿಸಿ-ನೆಟ್) ಮತ್ತು** ಕಿರಿಯ ಶಿಷ್ಯವೇತನ ಸಂಶೋಧನ ಸಹಾಯಕರ(ಜೆಆರ್‌ಎಫ್) ಪರೀಕ್ಷೆಗಳಿಗೆ 45 ದಿನಗಳ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ.

ಆಸಕ್ತರು ದಿನಾಂಕ:09.08.2024ರೊಳಗಾಗಿ **ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ** ದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವರಾದ **ಪ್ರೊ. ಕೆ.ಬಿ. ಪ್ರವೀಣ** ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ **0821-2515944** ಈ ದೂರವಾಣಿ ಸಂಖ್ಯೆಯಲ್ಲಿ ಸಂಪರ್ಕಿಸಬಹುದಾಗಿದೆ

ವಂದನೆಗಳೊಂದಿಗೆ,

31/07/2024

**ಕುಲಸಚಿವ**

ಗೆ,

ಗೌರವಪೂರ್ವಕವಾಗಿ

ಸಂಪಾದಕರು / ವರದಿಗಾರರು

____________________ ದಿನಪತ್ರಿಕೆ

ಮೈಸೂರು